**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎನ್ ರವಿಕುಮಾರ್ ಮತ್ತು ಶ್ರೀ ಕೇಶವ ಪ್ರಸಾದ್ ಎಸ್. ಇವರುಗಳು ನಿಯಮ 330 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:**

ರಾಜ್ಯದಲ್ಲಿ ಬಹುಸಂಖ್ಯಾತರು ಎಂದರೆ ಯಾರು? ಯಾವ ಆಧಾರದಲ್ಲಿ ಅವರನ್ನು ಬಹುಸಂಖ್ಯಾತರು ಎಂದು ಗುರುತಿಸಲಾಗಿದೆ? ಬಹುಸಂಖ್ಯಾತರು ಎಂಬುದಾಗಿ ಪರಿಗಣಿಸಲು ಇರುವ ಮಾನದಂಡಗಳೇನು, ಯಾವ ಮತ, ಪಂಥ, ಪಂಗಡ, ಜಾತಿಯವರನ್ನು ಬಹುಸಂಖ್ಯಾತರು ಎಂಬುದಾಗಿ ಪರಿಗಣಿಸಲಾಗುತ್ತಿದೆ? ಸದರಿ ಬಹುಸಂಖ್ಯಾತರಿಗೆ ಸರ್ಕಾರದಿಂದ ಯಾವ ಯಾವ ಸೌಲಭ್ಯಗಳನ್ನು ಮೀಸಲಿಡಲಾಗಿದೆ? ಬಹುಸಂಖ್ಯಾತರನ್ನು ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಕೈಗೊಳ್ಳಬಹುದಾದ ಯೋಜನೆಗಳ ಕುರಿತು.

**ಉತ್ತರ:**

ದಿನಾಂಕ: 16.11.1992 ರಂದು ನೀಡಿದ ಮಂಡಲ್ ವರದಿಗೆ ಸಂಬಂಧಿಸಿದ ತೀರ್ಪಿನಲ್ಲಿ ಘನ ಸರ್ವೋಚ್ಚ ನ್ಯಾಯಾಲಯವು ಪ್ರತಿಯೊಂದು ರಾಜ್ಯದಲ್ಲೂ ಶಾಶ್ವತವಾಗಿ ಹಿಂದುಳಿದ ವರ್ಗಗಳ ಆಯೋಗ ರಚನೆ ಆಗಬೇಕು ಎಂಬ ನಿರ್ದೇಶನದನ್ವಯ ರಾಜ್ಯದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ, 1995 ಜಾರಿಗೆ ಬಂದಿರುತ್ತವೆ.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ 1995ರ ಕಲಂ 9 (1) (i)ರಡಿಯಲ್ಲಿ ಈ ರೀತಿಯಾಗಿ ಉಲ್ಲೇಖಿತವಾಗಿರುತ್ತದೆ.

9 (1) (i) "ನಾಗರಿಕರ ಯಾವುದೇ ವರ್ಗವನ್ನು ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿಸಬೇಕೆಂದು ಬಂದ ಕೋರಿಕೆಗಳನ್ನು ಪರಿಶೀಲಿಸುವುದು ಮತ್ತು ಯಾವುದೇ ಹಿಂದುಳಿದ ವರ್ಗವನ್ನು ಅಂಥ ಪಟ್ಟಿಯಲ್ಲಿ ಹೆಚ್ಚಾಗಿ ಸೇರಿಸಲಾಗಿದೆ ಎಂದು ಅಥವಾ ಸೇರಿಸಲಾಗಿಲ್ಲವೆಂದು ಬಂದ ದೂರುಗಳ ವಿಚಾರಣೆ ಮಾಡುವುದು ಮತ್ತು ಸರ್ಕಾರಕ್ಕೆ ಅದು ಸಮುಚಿತವೆಂದು ಭಾವಿಸುವಂಥ ಸಲಹೆಯನ್ನು ನೀಡುವುದು.

9 (1) (ii) ಹಿಂದುಳಿದ ವರ್ಗಗಳಿಗೆ ಸೇರಿದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಮತ್ತು ಸಮಸ್ಯೆಗಳ ಬಗ್ಗೆ ಸರ್ವೇ ಮಾಡುವುದು".

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ 1995 ರಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಹಿಂದುಳಿದ ವರ್ಗಗಳಿಗೆ ಸಂಬಂಧಿಸಿದಂತೆ, ಸರ್ಕಾರಕ್ಕೆ ಸಲಹೆ/ಶಿಫಾರಸ್ಸನ್ನು ನೀಡುತ್ತದೆ.

ಮುಂದುವರೆದು, ಹಿಂದುಳಿದ ವರ್ಗಗಳನ್ನು ಗುರುತಿಸುವಾಗ ಆಯೋಗವು ಮತ, ಪಂಥ, ಪಂಗಡಗಳನ್ನು ಪರಿಗಣಿಸದೇ ಆಯಾ ಜಾತಿ/ಸಮುದಾಯದ ಹಿಂದುಳಿದಿರುವಿಕೆ, ಸಮುದಾಯದ ಗಾತ್ರ ಮತ್ತು ಸಾಮಾಜಿಕ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವಿಕೆಯನ್ನು ಪರಿಗಣಿಸಿ ಜಾತಿ/ಸಮುದಾಯಗಳನ್ನು ಹಿಂದುಳಿದ ವರ್ಗಗಳೆಂದು ಗುರುತಿಸಿ ಹಿಂದುಳಿದ ವರ್ಗಗಳ ಪಟ್ಟಿಯನ್ನು ಸಿದ್ಧಪಡಿಸಲಾಗುತ್ತದೆ.

ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿದ ಈ ಸಮುದಾಯಗಳಿಗೆ ವೈಜ್ಞಾನಿಕವಾಗಿ ವರ್ಗೀಕರಿಸಿ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿಯನ್ನು ಕಲ್ಪಿಸಿ ಸಮಾಜದ ಮುಖ್ಯವಾಹಿನಿಗೆ ತರಲಾಗುತ್ತಿದೆ.

ಹೀಗಾಗಿ, ಬಹುಸಂಖ್ಯಾತರನ್ನು ಗುರುತಿಸುವುದು, ಬಹುಸಂಖ್ಯಾತರಿಗೆ ಸೌಲಭ್ಯಗಳನ್ನು ಒದಗಿಸುವುದು ಹಾಗೂ ಬಹುಸಂಖ್ಯಾತರನ್ನು ಸಮಾಜದ ಮುಖ್ಯವಾಹಿನಿಗೆ ತರುವ ವಿಷಯಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಾರ್ಯವ್ಯಾಪ್ತಿಯಲ್ಲಿ ಬರುವುದಿಲ್ಲ.

**<u>ಸಂಖ್ಯೆ:</u>ಹಿಂವಕ 198 ಬಿಸಿಎ 2024**

(ಶಿವರಾಜ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ,
ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರು